ಇ) ಶಿಕ್ಷಣ ತಜ್ಞರು, ಸಂಘ-ಸಂಸ್ಥೆ ಹಾಗೂ ಗಣ್ಯ ವ್ಯಕ್ತಿಗಳೊಂದಿಗೆ ಸಮಾಲೋಚಿಸಿ ಸಲಹೆ ಮತ್ತು ಸೂಚನೆಗಳನ್ನು ಪರಿಗಣಿಸಿ ಅಂತಿಮ ಆದೇಶವನ್ನು ಹೊರಡಿಸಲಾಗಿದೆ.

ಗ್ರಾಮಾಂತರ ಪ್ರದೇಶದಲ್ಲಿನ ಪಿ.ಎಚ್.ಸಿ. ಮತ್ತು ಪಿ.ಎಚ್.ಯುಗಳಲ್ಲಿ ವೈದ್ಯರ ಸಮಯ ಪಾಲನೆ

2500 (3354) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಗ್ರಾಮಾಂತರ ಪ್ರದೇಶದಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಘಟಕಗಳಲ್ಲಿನ ವೈದ್ಯರು ನಿಗದಿತ ಸಮಯಕ್ಕೆ ನಿಯಮಿತವಾಗಿ ಹಾಜರಾಗದೇ ಇರುವುದನ್ನು ಸರ್ಕಾರ ಮನಗಂಡಿದೆಯೇ?

ಆ) ವೈದ್ಯರು ನಿಗದಿತ ಸಮಯಕ್ಕೆ ಕಡ್ಡಾಯವಾಗಿ ಹಾಜರಾಗಲು ಸರ್ಕಾರ ಏನಾದರೂ ಕಡ್ಡಾಯ ಕ್ರಮವನ್ನು ರೂಪಿಸಿ ಜಾರಿಗೊಳಿಸಲಾಗುವುದೇ?

ಇ) ಇದರ ವಿವರಗಳೇನು?

ಈ) ಡಾ: ಸುದರ್ಶನ್‌ರವರ ವರದಿ ಅನ್ವಯ ಸರ್ಕಾರಿ ಸೇವೆಯಲ್ಲಿನ ವೈದ್ಯರು ಖಾಸಗಿ ಪ್ರಾಕ್ಟೀಸ್ ಮಾಡುತ್ತಿರುವ ವಿಷಯದಲ್ಲಿ ಸರ್ಕಾರ ಯಾವುದಾದರೂ ನಿರ್ಧಾರವನ್ನು ತಳೆದಿದೆಯೇ?

ಡಾ: ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ಇಂತಹ ಕೆಲವು ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಈಗಾಗಲೇ ಜಾರಿಗೊಳಿಸಲಾಗಿದೆ.

ಇ) ಸರ್ಕಾರದ ನಿಯಮದ ಪ್ರಕಾರ ಪ್ರತಿಯೊಬ್ಬ ನೌಕರನು ಸಮಯಕ್ಕೆ ಸರಿಯಯಾಗಿ ಕಛೇರಿಗೆ ಹಾಜರಾಗತಕ್ಕದೆಂಬ ನಿಯಮ ಇರುತ್ತದೆ. ಈ ನಿಯಮವು ಸರ್ಕಾರಿ ವೈದ್ಯಾಧಿಕಾರಿಗಳಿಗೂ ಸಹ ಅನ್ವಯವಾಗುತ್ತದೆ. ಅಲ್ಲದೆ ವೈದ್ಯಾಧಿಕಾರಿಗಳು ಕೇಂದ್ರ ಸ್ಥಾನದಲ್ಲಿ ಇರುವುದನ್ನು ಕಡ್ಡಾಯಗೊಳಿಸುವ ಬಗ್ಗೆ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಯವರಿಗೆ ಆದೇಶ ನೀಡಲಾಗಿದೆ.

ಈ) ಯಾವುದೇ ನಿರ್ಧಾರ ತೆಗೆದುಕೊಂಡಿಲ್ಲ.